# ಗಡಿಕನ್ನಡಿಗ

www.gadikannadiga.com

ಸಂಪಾದಕ:ಮುರುಗೇಶ ಬಿ.ಶಿವಪೂಜಿ

ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ,ಕೊಪ್ಪಳ,ಗದಗ, ವಿಜಯಪುರ, ವಿಜಯನಗರ ಬಳ್ಳಾರಿಗಳಿಂದ ಏಕಕಾಲಕ್ಕೆ ಪ್ರಕಟಿತ

ಸಂಪುಟ:22/ಸಂಚಿಕೆ:138 RNI NO.KAR KAN/2003/10452:No./PMG/KA/NK/BM/743/24-26 ಶುಕ್ರವಾರ ದಿನಾಂಕ: 26-04-2024 ಪುಟಗಳು: 6 ಬೆಲೆ:1 ರೂ ☎ 9480498694 / Email-mbshivapuji@gmail.com2


## * * ಮನೆ ಮನೆ ಮತದಾನ ಪ್ರಕ್ರಿಯೆ ಪರಿಶೀಲಿಸಿದ * *

# ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ರಾಹುಲ ಶಿಂಧೆ

ಬೆಳಗಾವಿ.ಏ.25: ಲೋಕಸಭಾ ಚುನಾವಣೆ-2024ಕ್ಕೆ ಸಂಬಂಧಿಸಿದಂತೆ 85 ವರ್ಷ ಮೇಲ್ಪಟ್ಟ ವಯೋವೃದರಿಗೆ ಹಾಗೂ ವಿಕಲಚೇತನರಿಗೆ ಮನೆಯಿಂದಲೇ ಮತದಾನ ಮಾಡಲು ಅವಕಾಶ ಕಲ್ಪಿಸಲಾಗಿದೆ. ಚಿಕ್ಕೋಡಿ ಲೋಕಸಭ ಮತಕ್ಷೇತ್ರದ ವ್ಯಾಪ್ತಿಯ 85 ವರ್ಷ ಮೇಲ್ಪಟ್ಟ ಹಾಗೂ ವಿಕಲಚೇತನರಿಗೆ ಏ. 25 ರಿಂದ ಮನೆಯಿಂದಲೇ ಮತದಾನ ಮಾಡುವ ಪ್ರಕ್ರಿಯೆ ಪ್ರಾರಂಭಗೊಂಡಿರುತ್ತದೆ. ಈ ಹಿನ್ನಲೆಯಲ್ಲಿ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿಗಳಾದ ರಾಹುಲ ಶಿಂಧೆ ಅವರು ಗುರುವಾರ (ಏ.25) ರಂದು ಯಮಕನಮರಡಿ ವಿಧಾನಸಭಾ ಮತಕ್ಷೇತ್ರದ ವ್ಯಾಪ್ತಿಯ ಯಮಕನಮರಡಿ ಗ್ರಾಮಕ್ಕೆ ಭೇಟಿ ನೀಡಿ ಮತದಾನ ಪ್ರಕ್ರಿಯೆಯನ್ನು ಪರಿಶೀಲಿಸಿದರು.

ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಈಗಾಗಲೇ ನಗದಿತ ನಮೂನೆ ಭರ್ತಿ ಮಾಡುವ ಮೂಲಕ 2151 ಜನ 85 ವರ್ಷ ಮೇಲ್ಪಟ್ಟ ವಯೋವೃದ್ಧರು ಹಾಗೂ 1054 ಜನ ವಿಕಲಚೇತನರು ಸೇರಿದಂತೆ ಒಟ್ಟು 3205 ಜನರು ಮನೆಯಿಂದಲೇ ಮತದಾನಕ್ಕೆ ಒಪ್ಪಿಗೆ ನೀಡಿರುತ್ತಾರೆ.

ಕ್ಷೇತ್ರವಾರು ವಿವರ: ಅಥಣಿ ವಿಧಾನಸಭಾ ಮತಕ್ಷೇತ್ರದ ವ್ಯಾಪ್ತಿಯಲ್ಲಿ 253 ಜನ ಎಂಭತ್ತೈದು ವರ್ಷ ಮೇಲ್ಪಟ್ಟ, 137 ವಿಕಲಚೇತನರು, ಚಿಕ್ಕೋಡಿ-ಸದಲಗಾ 191 ಜನತ ವಯೋವೃದ್ಧರು, 95 ವಿಕಲಚೇತನರು, ಹುಕ್ಕೇರಿ ವಿಧಾನಸಭ ಮತಕ್ಷೇತ್ರ 202 ವಯೋವೃದ್ಧರು, 186 ವಿಕಲಚೇತನರು, ಕಾಗವಾಡ ವಿಧಾನಸಭಾ ಮತಕ್ಷೇತ್ರ 259 ವಯೋವೃದ್ಧರು, 132 ವಿಕಲಚೇತನರು, ಕುಡಚಿ ವಿಧಾನಸಭಾ ಮತಕ್ಷೇತ್ರ 382 ವಯೋವೃದ್ಧರು, 78 ವಿಕಲಚೇತನರು, ನಿಪ್ಪಾಣಿ ವಿಧಾನಸಭ ಮತಕ್ಷೇತ್ರ 420 ವಯೋವೃದ್ಧರು, 163 ವಿಕಲಚೇತನರು, ರಾಯಬಾಗ ವಿಧಾನಸಭಾ ಮತಕ್ಷೇತ್ರ 300 ವಯೋವೃದ್ಧರು, 127 ವಿಕಲಚೇತನರು, ಯಮಕನಮರಡಿ ವಿಧಾನಸಭ ಮತಕ್ಷೇತ್ರ 144



ವಯೋವೃದ್ಧರು, 136 ವಿಕಲಚೇತನರು ಮನೆಯಿಂದಲೆ ಮತದಾನಕ್ಕೆ ಒಪ್ಪಿಗೆ ಸೂಚಿಸಿರುತ್ತಾರೆ. ಮನೆಯಿಂದಲೆ ಮತದಾನ ಪ್ರಕ್ರಿಯೆಯು ಏ.27 ರ ವರೆಗೆ ಜರುಗಲಿದೆ.

## ಮೋದಿ ಪ್ರವಾಸದಲ್ಲಿ ಬದಲಾವಣೆ: ಏ. 27ಕ್ಕೆ ಆಗಮಿಸಿ ಬೆಳಗಾವಿಯಲ್ಲಿ ವಾಸ್ತವ್ಯ




ಬೆಳಗಾವಿ: ಬೆಳಗಾವಿಯಲ್ಲಿ ಮೋದಿಯವರು ಕೈಗೊಂಡಿದ್ದ ಪ್ರವಾಸದ ಸಮಯದಲ್ಲಿ ಬದಲಾವಣೆ ಆಗಿದೆ. ಏ. 28 ರ ಬದಲಾಗಿ 27 ರಂದೆ ಬೆಳಗಾವಿಗೆ ಆಗಮಿಸಿ, ವಾಸ್ತವ್ಯ ಹುಡಲಿದ್ದಾರೆ ಎಂದು ಬೆಳಗಾವಿ ಬಿಜೆಪಿ ಗ್ರಾಮೀಣ ಜಿಲ್ಲಾಧ್ಯಕ್ಷ ಶುಭಾಸ ಪಾಟೀಲ್ ಹೇಳಿದ್ದಾರೆ.

ಇಂದು ನಗರದ ಬಿಜೆಪಿ ಕಾರ್ಯಾಲಯದಲ್ಲಿ ಮಾತನಾಡಿದ ಅವರು, ಮೋದಿಯವರು ಕಾರ್ಯಕ್ರಮದ ಸಮಯ ಬದಲಾಗಿದೆ. ಏ. 28 ರಂದು ಬೆಳಗ್ಗ 12 ಗಂಟೆಗೆ ವೇದಿಕೆ ಕಾರ್ಯಕ್ರಮ ಆಗಲಿದೆ ಎಂದು ಹೇಳಲಾಗುತ್ತಿತ್ತು, ಆದರೆ 28 ರಂದು 10 ಗಂಟೆ ವೇದಿಕೆ ಕಾರ್ಯಕ್ರಮ ನಡೆಯಲಿದೆ. ಮಹಾರಾಷ್ಟ್ರದಿಂದ ರಸ್ತೆ ಮೂಲಕ ಬೆಳಗಾವಿಗೆ ಏ. 27 ರಂದು ಬಂದು ಬೆಳಗಾವಿಯ ಖಾಸಗಿ ಹೋಟೆಲ್ ನಲ್ಲಿ ಮೋದಿಯವರು ವಾಸ್ತವ್ಯ ಹುಡಲಿದ್ದಾರೆ ಎಂದು ತಿಳಿಸಿದರು.

ಈ ಕಾರ್ಯಕ್ರಮಕ್ಕೆ ಮಾಜಿ ಪ್ರಧಾನ ದೇವಗೌಡ, ಮಾಜಿ ಸಿಎಂ ಕುಮಾರ ಸ್ವಾಮಿ, ಮಾಜಿ ಸಿಎಂ ಯಡಿಯೂರಪ್ಪ, ವಿಜೇಂದ್ರ ಸೇರಿದಂತೆ ಅನೇಕರು ಕಾರ್ಯಕ್ರಮದಲ್ಲಿ ಇರಲಿದ್ದಾರೆ ಎಂದು ತಿಳಿಸಿದರು.

## ಬೆಳಗಾವಿಗೆ ಆಗಮಿಸಿದ ಸುರ್ಜೇವಾಲ: ಸ್ವಾಗತಿಸಿದ ಸಚಿವೆ ಲಕ್ಷ್ಮೀ ಹೆಬ್ಬಾಳಕರ್

ಬೆಳಗಾವಿ : ಎಐಸಿಸಿ ಕಾರ್ಯದರ್ಶಿ ಹಾಗೂ ಕರ್ನಾಟಕ ಉಸ್ತುವಾರಿ ರಣದೀಪ್ ಸುರ್ಜೆವಾಲಾ ಬೆಳಗಾವಿಯ ಸದಾಶಿವನಗರದಲ್ಲಿರುವ ಅಥಣಿ ಶಾಸಕ ಹಾಗೂ ಮಾಜಿ ಉಪ ಮುಖ್ಯಮಂತ್ರಿ ಲಕ್ಷ್ಮಣ್ ಸವಧಿ ಅವರ ಮನೆಗೆ ಆಗಮಿಸಿದರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರನ್ನು ಭೇಟಿಯಾಗಿ ಪ್ರಸಕ್ತ ಚುನಾವಣೆ ಕುರಿತು ಚರ್ಚಿಸಿದರು. ಲಕ್ಷ್ಮಣ ಸವದಿ ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ, ಶಾಸಕ ರಾಜು ಸೇಠ್ ಮೊದಲಾದವರು ಇದ್ದರು.



# ಒಡೆದು ಆಳುವ ತಂತ್ರಕ್ಕೆ ಬಿಜೆಪಿ ಮುಂದಾಗಿದೆ: ಸುರ್ಜೇವಾಲಾ

ಬೆಳಗಾವಿ: ಬೆಳಗಾವಿಯ ಕಾಂಗ್ರೆಸ್ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದ ಕಾಂಗ್ರೆಸ್ ಮುಖಂಡ ಸುರ್ಜೇ ವಾಲಾ, ವಸಾಹತುಶಾಹಿ ಕಾಲದ ಈಸ್ಟ್ ಇಂಡಿಯಾ ಕಂಪನಿಯ ಒಡೆದು ಆಳುವ ತಂತ್ರಕ್ಕೆ ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದರು.

ಪ್ರಧಾನ ಮೋದಿ ಮತ್ತು ಗೃಹ ಸಚಿವ ಅಮಿತ್ ಶಾ ಅವರು ಜಾತಿಯ ಆಧಾರದ ಮೇಲೆ ಸಾಮಾಜಿಕ ವಿಭಜನೆಯನ್ನು ಉಲ್ಬಣಗೊಳಿಸುತ್ತಿದ್ದಾರೆ ಎಂದು ಆರೋಪಿಸಿದರು. ಬಿಜೆಪಿಯು ಕರ್ನಾ ಟಕದ ಜನರೊಂದಿಗೆ ದ್ವೇಷ ವನ್ನು ಹೊಂದಿದೆ, ನಿರ್ಲಕ್ಷ್ಯದ ಮೂಲಕ ಸೇಡು



ತೀರಿಸಿಕೊಳ್ಳಲು ಮತ್ತು ರಾಜ್ಯದಿಂದ ಅಗತ್ಯ ಸಂಪನ್ಮೂಲಗಳನ್ನು ತಡೆ ಹಿಡಿಯುತ್ತಿದೆ ಎಂದು ಸುರ್ಜೇವಾಲಾ ಆರೋಪಿಸಿದ್ದಾರೆ. ಬಿಜೆಪಿ ಸರಕಾರಕ್ಕೆ ಕನ್ನಡ ವಿರೋಧಿ ಎಂಬ ಹಣೆಪಟ್ಟಿ ಕಟ್ಟಿ, ಜನತೆಯ ಮೂಲಭೂತ ಅಗತ್ಯಗಳನ್ನು ಈಡೇರಿಸುವಲ್ಲಿ ವಿಫಲರಾಗಿದ್ದಾರೆ ಎಂದು ಆರೋಪಿಸಿದರು. ಕರ್ನಾಟಕದಲ್ಲಿ ಬರಗಾಲದ ಸಮಸ್ಯೆಯನ್ನು ಎತ್ತಿ ಹಿಡಿದ ಸುರ್ಜೇವಾಲಾ, ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರವು ರಾಜ್ಯದ ಬರ ಘೋಷಣೆಯನ್ನು ನಿರಾಕರಿಸಿದೆ ಮತ್ತು ರಾಷ್ಟ್ರೀಯ ವಿಪತ್ತು ಪ್ರತಿಕ್ರಿಯೆ ನಿಧಿಯಿಂದ (ಎನ್‌ಡಿಆರ್‌ಎಫ್) ಹಣವನ್ನು ತಡೆಹಿಡಿಯುತ್ತಿದೆ ಎಂದು ಟೀಕಿಸಿದರು. ಸುಪ್ರೀಂ ಕೋರ್ಟ್ ವಾಗ್ದಂಡನೆಯ ನಂತರವೂ ಬಿಜೆಪಿ ಸರ್ಕಾರವು ಒಟ್ಟು 58,000 ಕೋಟಿ ಹಣವನ್ನು ಬಿಡುಗಡೆ ಮಾಡಲು ವಿಳಂಬ ಮಾಡಿದೆ ಎಂದು ಅವರು ಒತ್ತಿ ಹೇಳಿದರು.

ಕರ್ನಾಟಕಕ್ಕೆ ನೀಡಬೇಕಾದ ತೆರಿಗೆ ರಿಟರ್ನ್ಸ್‌ನಲ್ಲಿನ ವ್ಯತ್ಯಾಸಗಳ ಬಗ್ಗೆ ಕಾಂಗ್ರೆಸ್ ನಾಯಕ ಕಳವಳ ವ್ಯಕ್ತಪಡಿಸಿದರು, ಬಿಜೆಪಿ ಸಾಕಷ್ಟು ಮೊತ್ತವನ್ನು ಬಿಡುಗಡೆ ಮಾಡಿದೆ ಎಂದು ಆರೋಪಿಸಿದರು. ಪ್ರಧಾನ ಮೋದಿ ಮತ್ತು ಗೃಹ ಸಚಿವ ಅಮಿತ್ ಶಾ ಅವರಿಗೆ ಕಠಿಣ ಎಚ್ಚರಿಕೆ ನೀಡಿದ ಅವರು, ಒಡೆದು ಆಳುವ ನೀತಿಗಳನ್ನು ಕೈಬಿಟ್ಟು ಕರ್ನಾಟಕಕ್ಕೆ ಭೇಟಿ ನೀಡದಂತೆ ಒತ್ತಾಯಿಸಿದರು. ಪ್ರಮುಖ ಕಾಂಗ್ರೆಸ್ ಸದಸ್ಯರಾದ ಸತೀಶ್ ಜಾರಕಿಹೊಳಿ, ರಾಜು ಸೇಟ್, ಮತ್ತು ಲಕ್ಷ್ಮಣ್ ಸವಧಿ ಅವರೊಂದಿಗೆ, ಸುರ್ಜೆವಾಲಾ ಅವರು ಮೋದಿ ಸರ್ಕಾರದ

(2 ನೇ ಪುಟಕ್ಕೆ)

## ಬಳ್ಳಾರಿ ಲೋಕಸಭಾ ಚುನಾವಣೆ ಸ್ಪರ್ಧೆಯಲ್ಲಿನ ಅಭ್ಯರ್ಥಿಗಳಿಗೆ ಚಿಹ್ನೆ ಹಂಚಿಕೆ: ಜಿಲ್ಲಾ ಚುನಾವಣಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ

ಬಳ್ಳಾರಿ,ಏ.25: 09-ಬಳ್ಳಾರಿ (ಪ.ಪಂ) ಲೋಕಸಭೆ ಸಾರ್ವತ್ರಿಕ ಚುನಾ ವಣೆ ಹಿನ್ನಲೆಯಲ್ಲಿ ಬಳ್ಳಾರಿ ಲೋಕಸಭೆ ಮತಕ್ಷೇತ್ರಕ್ಕೆ ಸ್ಪರ್ಧಿಸಿರುವ ಅಭ್ಯರ್ಥಿಗಳಿಗೆ ಚುನಾವಣಾ ಆಯೋಗದ ನಿಯಮಗಳ ಅನ್ವಯ ಚಿಹ್ನೆ ಹಂಚಿಕೆ ಮಾಡಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.



ಮಾನ್ಯತೆ ಪಡೆದ ರಾಷ್ಟ್ರೀಯ ಮತ್ತು ರಾಜ್ಯ ರಾಜಕೀಯ ಪಕ್ಷಗಳಾದ ಇಂಡಿಯನ್ ನ್ಯಾಷನಲ್ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಈ.ತುಕಾರಾಮ್ ಅವರಿಗೆ ಕೈ ಚಿಹ್ನೆ, ಬಹುಜನ ಸಮಾಜ ಪಾರ್ಟಿಯ ಅಭ್ಯರ್ಥಿ ವಾಲ್ಮೀಕಿ ಕೃಷ್ಣಪ್ಪ ಅವರಿಗೆ ಆನೆ ಚಿಹ್ನೆ, ಭಾರತೀಯ ಜನತಾ ಪಕ್ಷದ ಅಭ್ಯರ್ಥಿ ಬಿ.ಶ್ರೀರಾಮುಲು ಅವರಿಗೆ ಕಮಲ ಚಿಹ್ನೆ ನೀಡಲಾಗಿದೆ.

ಅದರಂತೆ ನೋಂದಾಯಿತ ರಾಜಕೀಯ ಪಕ್ಷಗಳ ಅಭ್ಯರ್ಥಿ ಗಳಾದ ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷದ ಅಭ್ಯರ್ಥಿ ಸಿ.ಚನ್ನವೀರ ಅವರಿಗೆ ಬ್ಯಾಟರಿ ಟಾರ್ಚ್ ಚಿಹ್ನೆ, ಸೋಷಿಯಲಿಸ್ಟ್ ಯುನಿಟಿ ಸೆಂಟರ್ ಆಫ್ ಇಂಡಿಯಾ (ಕಮ್ಯುನಿಷ್ಟ್) ಪಕ್ಷದ ಅಭ್ಯರ್ಥಿ ಎ.ದೇವದಾಸ್ ಅವರಿಗೆ ಆಟೋ ರಿಕ್ಷಾ ಚಿಹ್ನೆ, ಪ್ರಹರ್ ಜನಶಕ್ತಿ ಪಾರ್ಟಿಯ ಅಭ್ಯರ್ಥಿ ಮಂಜುನಾಥ ಗೋಸಲ ಅವರಿಗೆ ಕಬ್ಬು ರೈತ, ನವಭಾರತ ಸೇನಾ ಪಕ್ಷದ ಅಭ್ಯರ್ಥಿ ಜಿ.ಸ್ವಾಮಿ ಅವರಿಗೆ ಟಿಲ್ಲರ್ ಚಿಹ್ನೆ ನೀಡಲಾಗಿದೆ.ಪಕ್ಷೇತರ ಅಭ್ಯರ್ಥಿಗಳಾದ ಅರುಣ್. ಎಸ್. ಹಿರೇಹಾಳ್ ಅವರಿಗೆ ಲ್ಯಾಪ್ ಟಾಪ್ ಚಿಹ್ನೆ, ಕಂಡಕ್ಟರ್ ಪಂಪಾ ಪತಿ ಅವರಿಗೆ ಸೀಟಿ (ವ್ಹಿಜಲ್), ವೀರೇಶ ಅವರಿಗೆ ಪ್ರೆಷರ್ ಕುಕ್ಕರ್ ಚಿಹ್ನೆಗಳನ್ನು ಹಂಚಿಕೆ ಮಾಡಲಾಗಿದ್ದು, ಮೇ 07 ರಂದು ಮತದಾನ ನಡೆಯಲಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಆಗಿರುವ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

## ದಾಖಲೆ ಇಲ್ಲದ ರೂ.23 ಲಕ್ಷ ನಗದು ವಶಕ್ಕೆ: ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ

ಬಳ್ಳಾರಿ,ಏ.25:ನಗರದ ಬ್ರೂಸ್‌ಪೇಟೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಕಮಲೇಶ್ ಎನ್ನುವ ವ್ಯಕ್ತಿಯ ಮನೆಯಲ್ಲಿ ಸೂಕ್ತ ದಾಖಲೆಯಿಲ್ಲದ ರೂ.23 ಲಕ್ಷದ ನಗದನ್ನು ಬುಧವಾರ ವಶಪಡಿಸಿಕೊಂಡು ಪ್ರಕರಣ ದಾಖಲಿಸಲಾಗಿದ್ದು, ಆದಾಯ ತೆರಿಗೆ ಇಲಾಖೆಗೆ ಒಪ್ಪಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಆಗಿರುವ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

ಲೋಕಸಭೆ ಸಾರ್ವತ್ರಿಕ ಚುನಾವಣೆ ಅಂಗವಾಗಿ ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಖಚಿತ ಮಾಹಿತಿ ಮೇರೆಗೆ ಎಫ್‌ಎಸ್‌ಟಿ ಮತ್ತು ಎಸ್‌ಎಸ್‌ಟಿ ತಂಡಗಳು ದಾಳಿ ನಡೆಸಿ, ಜಪ್ತಿ ಮಾಡಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಅದೇರೀತಿಯಾಗಿ ವಿವಿಧೆಡೆ ಅಬಕಾರಿ ಇಲಾಖೆ ಪೊಲೀಸ್ ಅಧಿಕಾರಿಗಳಿಂದ 30.06 ಲೀ. (ಅಂದಾಜು ರೂ.15,148 ಮೌಲ್ಯದ) ಮದ್ಯ ವಶಪಡಿಸಿಕೊಳ್ಳಲಾಗಿದೆ ಮತ್ತು 0.08 ಕೆ.ಜಿ (ಅಂದಾಜು ರೂ.1,400 ಮೌಲ್ಯದ) ಗಾಂಜಾ ವಶಪಡಿಸಿಕೊಂಡು ಪ್ರಕರಣ ದಾಖಲಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಆಗಿರುವ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

# ಎತ್ತಿನ ಬಂಡಿ ಏರಿ ಮತದಾನ ಜಾಗೃತಿ ಮೂಡಿಸಿದ ತಾ.ಪಂ ಇಓ

ಕೊಪ್ಪಳ ಏಪ್ರಿಲ್ 25 : ಆಸೆ ಆಮಿಷ ’ಗಳಿಗೆ ಒಳಗಾಗದೇ ಪ್ರತಿಯೊಬ್ಬರೂ ಕಡ್ಡಾಯವಾಗಿ ಮತವನ್ನು ಚಲಾಯಿಸುವಂತೆ ಕೂಲಿ ಕಾರರಿಗೆ ಕುಷ್ಟಗಿ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು ಕರೆ ನೀಡಿದರು.ಗುರುವಾರದಂದು ಕುಷ್ಟಗಿ ತಾಲೂಕಿನ ಜಾಗೀರ್ ಗುಡದೂರು ಗ್ರಾ.ಪಂ ವತಿಯಿಂದ ಜಾಗೀರ್ ಗುಡದೂರು ಗ್ರಾಮದ ಕೆರೆಯ ಅಂಗಳದಲ್ಲಿ ಹಾಗೂ ಗ್ರಾಮದ ಪ್ರಮುಖ ಬೀದಿಗಳಲ್ಲಿ ತಾಲೂಕು ಸ್ವೀಪ್ ಸಮಿತಿ ಹಾಗೂ ಗ್ರಾಮ ಪಂಚಾಯತಿ ವತಿಯಿಂದ ಹಮ್ಮಿಕೊಂಡಿದ್ದ ಮತದಾನ



ಜಾಗೃತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಪ್ರಪಂಚದಲ್ಲಿಯೇ ಅತಿ ದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರವಾದ ನಮ್ಮ ದೇಶದಲ್ಲಿ ಮತದಾನ ಪವಿತ್ರವಾದ ಕರ್ತವ್ಯ. ಸಂವಿಧಾನ ನಮ್ಮೆಲ್ಲರಿಗೂ ನೀಡಿರುವ ಒಂದು ಹಕ್ಕು. ಅದನ್ನು ಎಲ್ಲರೂ ಯಾವುದೇ ಆಸೆ ಆಮಿಷಗಳಿಗೆ ಒಳಗಾಗದೇ ಮತದಾನ ಮಾಡಬೇಕು. ಕಳೆದ ಲೋಕಸಭಾ ಚುನಾವಣೆಗಿಂತ ಈ ಬಾರಿ ಹೆಚ್ಚಿನ ಮತದಾನ ಮಾಡಿ ಪ್ರಜಾಪ್ರಭುತ್ವ ಗೆಲ್ಲಿಸಬೇಕು ಎಂದು ಅವರು ತಿಳಿಸಿದರು. (2 ನೇ ಪುಟಕ್ಕೆ)

# ಮಲೇರಿಯ ಮುಕ್ತ ಜಿಲ್ಲೆಯನ್ನಾಗಿಸಲು ಸಹಕರಿಸಿ: ಡಿಹೆಚ್‌ಓ ಡಾ.ವೈ.ರಮೇಶ್ ಬಾಬು

ಬಳ್ಳಾರಿ,ಏ.25:ಸಾರ್ವಜನಿಕರು ಯಾವುದೇ ಜ್ವರವಿರಲಿ, ರಕ್ತಲೇಪನ ಪರೀಕ್ಷೆ ಮಾಡಿಸುವ ಮೂಲಕ ರೋಗ ತಡೆಗಟ್ಟಲು ಇಲಾಖೆಯೊಂದಿಗೆ ಕೈಜೋಡಿಸಲು ಹಾಗೂ ಶೂನ್ಯ ಮಲೇರಿಯಾ ಗುರಿಯನ್ನು ತಲುಪಲು ಸಹಕರಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ



ಕಲ್ಯಾಣಾಧಿಕಾರಿ ಡಾ.ವೈ.ರಮೇಶ್ ಬಾಬು ಅವರು ಹೇಳಿದರು.

ಇಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಕಚೇರಿ ಇವರ ಸಂಯುಕ್ತಾಶ್ರಯದಲ್ಲಿ ‘ವಿಶ್ವ ಮಲೇರಿಯಾ ದಿನಾಚರಣೆ’ ಅಂಗವಾಗಿ ನಗರದ ಜಿಲ್ಲಾ ಆಸ್ಪತ್ರೆಯ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಧಿಕಾರಿಗಳ ಕಚೇರಿ ಆವರಣದಿಂದ ಏರ್ಪಡಿಸಿದ್ದ ಟ್ಯಾಬ್ಲೋ ಜಾಥಾಗೆ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಹತ್ತಿರದ ಸರ್ಕಾರಿ ಆಸ್ಪತ್ರೆಯಲ್ಲಿ ಮಲೇರಿಯಾ ರೋಗಕ್ಕೆ ಉಚಿತವಾಗಿ ರಕ್ತ ಪರೀಕ್ಷೆ ಮಾಡಿಸಿಕೊಂಡು ಸೂಕ್ತ ಚಿಕಿತ್ಸೆ ಪಡೆದುಕೊಳ್ಳಬಹುದು ಹಾಗೂ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಮಲೇರಿಯಾ ಜ್ವರಕ್ಕೆ ಉಚಿತವಾಗಿ ಚಿಕಿತ್ಸೆ ನೀಡಲಾಗುತ್ತಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಗಣನೀಯವಾಗಿ ಮಲೇರಿಯಾ ಪ್ರಕರಣಗಳು ಇಳಿಕೆಯಾಗಿದ್ದು, ಯಾರಿಗಾದರೂ ವಿಪರೀತ ಜ್ವರದೊಂದಿಗೆ ಮಲೇರಿಯಾ ರೋಗದ ಲಕ್ಷಣ ಕಂಡುಬಂದಲ್ಲಿ ಹತ್ತಿರದ ಸರ್ಕಾರಿ ಆಸ್ಪತ್ರೆಗಳಲ್ಲಿ ಮಲೇರಿಯಾ ಜ್ವರಕ್ಕೆ ಉಚಿತವಾಗಿ ಚಿಕಿತ್ಸೆ ನೀಡಲಾಗುತ್ತಿದೆ ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು. ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಆರ್.ಅಬ್ದುಲ್ಲಾ ಅವರು ಮಾತನಾಡಿ, ಮಲೇರಿಯಾ ಜ್ವರವು ಪ್ಲಾಸ್ಮೋಡಿಯಂ ಎಂಬ ಪರಾವಲಂಭಿ ಸೂಕ್ಷ್ಮಾಣುವಿನಿಂದ ಉಂಟಾಗುತ್ತದೆ ಹಾಗೂ ಹೆಣ್ಣು ಅನಾಫಿಲೀಸ್ ಸೊಳ್ಳೆಯ ಕಚ್ಚುವಿಕೆಯಿಂದ ಒಬ್ಬರಿಂದ ಒಬ್ಬರಿಗೆ ಹರಡುವಂತ ರೋಗವಾಗಿದ್ದು, ಚಳಿ, ನಡುಕ, ಬಿಟ್ಟು ಬಿಟ್ಟು ಜ್ವರ ಬರುವುದು, ವಾಕರಿಕೆ, ಮೈ ಬೆವರುವುದು ಮಲೇರಿಯಾ ರೋಗ ಲಕ್ಷಣಗಳಾಗಿದ್ದು, ಈ ಲಕ್ಷಣಗಳು ಕಂಡು ಬಂದಲ್ಲಿ ಹತ್ತಿರದ ಸರ್ಕಾರಿ ಆಸ್ಪತ್ರೆಯಲ್ಲಿ ರಕ್ತ ಪರೀಕ್ಷೆಗೆ ಒಳಪಟ್ಟು ಸೂಕ್ತ ಉಚಿತ ಚಿಕಿತ್ಸೆಯನ್ನು ಪಡೆಯಬಹುದು ಎಂದು ಹೇಳಿದರು. ಮಲೇರಿಯಾ ಪ್ರಕರಣಗಳು ಕಂಡು ಬಂದಲ್ಲಿ ಮನೆಯ ಸುತ್ತಮುತ್ತಲು ಇಲಾಖೆಯಿಂದ ಕೈಗೊಳ್ಳುವ ಕೀಟನಾಶಕ ಸಿಂಪರಣೆಗೆ ಸಾರ್ವಜನಿಕರು ಅವಕಾಶ ನೀಡಬೇಕು. ಸ್ವಯಂ ರಕ್ಷಣಾ ಕ್ರಮಗಳಾದ ಮಲಗುವಾಗ ಸೊಳ್ಳೆ ಪರದೆಗಳನ್ನು ಬಳಕೆ ಮಾಡುವುದು, ಕಿಟಕಿಗಳಿಗೆ ಸೊಳ್ಳೆಗಳು ನುಸುಳದಂತೆ ಜಾಲರಿ ಅಳವಡಿಸುವುದು ಮತ್ತು ಇಲಾಖೆಯಿಂದ ನೀಡಲ್ಪಡುವ ಲಾರ್ವಾಹಾರಿ ಗಪ್ಪಿ ಮತ್ತು ಗಂಬೂಷಿಯಾ ಮೀನುಗಳನ್ನು ಶಾಶ್ವತವಾಗಿ ನೀರು ನಿಲ್ಲುವ ಸ್ಥಳಗಳಲ್ಲಿ ಬಿಡಲು ಉಚಿತವಾಗಿ (2 ನೇ ಪುಟಕ್ಕೆ)

## ದ್ವಿತೀಯ ಪಿ.ಯು.ಸಿ. ಪರೀಕ್ಷೆ -2 ವೀಕ್ಷಕರ ಮಾರ್ಗಾಧಿಕಾರಿಗಳ ನೇಮಕ

ಗದಗ ಏಪ್ರಿಲ್ 25 : ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯು ಏಪ್ರಿಲ್ 29 ರಿಂದ ಮೇ 16 ರವರೆಗೆ ಬೆಳಿಗ್ಗೆ 10.15 ಗಂಟೆಯಿಂದ ಸಂಜೆ 5.30 ರವರೆಗೆ ದ್ವಿತೀಯ ಪಿಯುಸಿ ಪರೀಕ್ಷೆ -2 ಯನ್ನು ನಡೆಸಲಿದೆ.

ಪರೀಕ್ಷಾ ಸಮಯದಲ್ಲಿ ನಕಲು ಮಾಡುವುದು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಮುಂತಾದ ಅವ್ಯವಹಾರ ತಡೆಗಟ್ಟಲು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು ಮತ್ತು ಶಾಂತಿ ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಜಿಲ್ಲೆಯ ಪರೀಕ್ಷಾ ಕೇಂದ್ರಗಳಲ್ಲಿ ವೀಕ್ಷಕರ , ಮಾರ್ಗಾಧಿಕಾರಿಗಳ ಹಾಗೂ ತ್ರಿಸದಸ್ಯ ಸಮಿತಿ ನೇಮಕ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಗಳ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.